## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಶ್ರೀ ಸಿದ್ದಪ್ಪ, ಕಿರಿಯ ಇಂಜಿನಿಯರ್,(ನಿವೃತ್ತ) ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ ಬೆಂಗಳೂರು ಇವರ ವೈದ್ಯಕೀಯ ವೆಚ್ಚ ಮರುಪಾವತಿಸುವ ಬಗ್ಗೆ – ಆದೇಶ

ಓದಲಾಗಿದೆ :-1) ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ ಬೆಂಗಳೂರು ಇವರ ಪತ್ರ ಸಂಖ್ಯೆ: ಕೆ.ಆರ್.ಆರ್.ಡಿ.ಎ:ಎಡಿಎಂ:ಸಿ–2:ವೈ.ವೆಚ್:2018–19 ದಿನಾಂಕ:07.07.2018

2) ಸರ್ಕಾರದ ಆದೇಶ ಸಂಖ್ಯೆ: ಆಇ **01** ಟಿಎಫ್‌ಪಿ **2012**, ದಿನಾಂಕ : **20.01.12** ಮತ್ತು ಸಿಆಸುಇ **31** ಎಸ್‌ಎಂಆರ್ **2014**, ದಿನಾಂಕ : **05.11.14**

*****

ಪ್ರಸ್ತಾವನೆ :

ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ ಬೆಂಗಳೂರು ಇವರು ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ದಿನಾಂಕ 07.07.2018ರ ಪತ್ರದಲ್ಲಿ ಶ್ರೀ ಸಿದ್ದಪ್ಪ, ಕಿರಿಯ ಇಂಜಿನಿಯರ್, (ನಿವೃತ್ತ) ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ ಬೆಂಗಳೂರು ಇವರು ತೀವ್ರ ಹೃದಯಾಘಾತದಿಂದ IHA DOJT PRJA AND stenting or coronary Angiogram+successful pami to RCA ಎಂಬ ಖಾಯಿಲೆ ಸಂಬಂಧ ತಥಾಗತ್ ಹಾರ್ಟ ಕೇರ್ ಸೆಂಟರ್, ಬೆಂಗಳೂರು ಇಲ್ಲಿ ಚಿಕಿತ್ಸೆಗೆ ಒಳಪಟ್ಟಿದ್ದು, ಇದಕ್ಕೆ ರೂ. 4,38,481/–ಗಳು ವೆಚ್ಚವಾಗಿದ್ದು, ಸದರಿ ಆಸ್ಪತ್ರೆಯು ಸರ್ಕಾರದಿಂದ ಮಾನ್ಯತೆ ಹೊಂದಿಲ್ಲದ ಕಾರಣ ಒಟ್ಟಾರೆ ಚಿಕಿತ್ಸೆಗೆ ವೆಚ್ಚವಾದ ಮೊತ್ತದ ಪೈಕಿ ನಿರ್ದೇಶಕರು, ಆರೋಗ್ಯ ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು ಇವರು ದೃಢೀಕರಿಸಿರುವಂತೆ ಮರುಪಾವತಿಸಬಹುದಾದ ಅರ್ಹತಾ ಮೊತ್ತ ರೂ.1,68,570/–ಗಳನ್ನು ಮರುಪಾವತಿಸಲು ವಿಶೇಷ ಮಂಜೂರಾತಿ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರದ ಆದೇಶ ದಿನಾಂಕ : 20.01.2012 ಮತ್ತು 05.11.2014ಗಳಲ್ಲಿ ತಿಳಿಸಿರುವ ಅಂಶಗಳನ್ವಯ ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿದೆ. ಶ್ರೀ ಸಿದ್ದಪ್ಪ, ಕಿರಿಯ ಇಂಜಿನಿಯರ್,(ನಿವೃತ್ತ) ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ ಬೆಂಗಳೂರು ಇವರು ತೀವ್ರ ಹೃದಯಾಘಾತದ ಗಂಭೀರ ಸ್ವರೂಪದ ಮಾರಣಾಂತಿಕ ಖಾಯಿಲೆಯಿಂದ ಬಳಲಿರುವುದನ್ನು ಗಣನೆಗೆ ತೆಗೆದುಕೊಂಡು, ರೋಗಿಯ ಜೀವನ್ಮರಣ ಹೋರಾಟದ ತುರ್ತು ಪರಿಸ್ಥಿತಿಯಲ್ಲಿ ಸರ್ಕಾರದಿಂದ ಮಾನ್ಯತೆ ಹೊಂದಿಲ್ಲದ ತಥಾಗತ್ ಹಾರ್ಟ ಕೇರ್ ಸೆಂಟರ್, ಬೆಂಗಳೂರು ಇಲ್ಲಿ ಚಿಕಿತ್ಸೆ ಪಡೆದಿರುವುದನ್ನು ಒಂದು ವಿಶೇಷ ಪ್ರಕರಣವೆಂದು ಪರಿಗಣಿಸಿ, ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ

ನಿರ್ದೇಶನಾಲಯ, ಬೆಂಗಳೂರು ಇವರು ನೀಡಿರುವ ಅಭಿಪ್ರಾಯದನುಸಾರ ಸದರಿಯವರ ಚಿಕಿತ್ಸಾ ವೆಚ್ಚದ ಪೈಕಿ ಮರುಪಾವತಿಸಬಹುದಾದ ಅರ್ಹತಾ ಮೊತ್ತವೆಂದು ರೂ. 1,68,570/-ಗಳನ್ನು ಮರುಪಾವತಿಸಲು ಸರ್ಕಾರದ ವಿಶೇಷ ಮಂಜೂರಾತಿ ನೀಡಲು ತೀರ್ಮಾನಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 294 ಜಿಪಅ 2018, ಬೆಂಗಳೂರು, ದಿನಾಂಕ :15.11.2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಸರ್ಕಾರವು ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು 1963ರ ನಿಯಮ 31ರಿಂದ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ನಿಯಮ 14ನ್ನು ಸಡಿಲಿಸಿ, ಶ್ರೀ ಸಿದ್ದಪ್ಪ, ಕಿರಿಯ ಇಂಜಿನಿಯರ್, (ನಿವೃತ್ತ) ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ ಬೆಂಗಳೂರು ಇವರು ತೀವ್ರ ಹೃದಯಾಘಾತದಿಂದ IHA DOJT PRJA AND stenting or coronary Angiogram+successful pami to RCA ಎಂಬ ಖಾಯಿಲೆ ಸಂಬಂಧ ಸರ್ಕಾರದಿಂದ ಮಾನ್ಯತೆ ಹೊಂದಿಲ್ಲದ ತಥಾಗತ್ ಹಾರ್ಟ ಕೇರ್ ಸೆಂಟರ್, ಬೆಂಗಳೂರು ಇಲ್ಲಿ ಚಿಕಿತ್ಸೆ ಪಡೆದಿರುವುದನ್ನು ಒಂದು ವಿಶೇಷ ಪ್ರಕರಣವೆಂದು ಪರಿಗಣಿಸಿ, ಸದರಿಯವರ ಚಿಕಿತ್ಸಾ ವೆಚ್ಚದ ಪೈಕಿ ರೂ. 1,68,570/- (ಒಂದು ಲಕ್ಷದ ಅರವತ್ತೆಂಟು ಸಾವಿರದ ಐನೂರ ಎಪ್ಪತ್ತು ರೂಪಾಯಿಗಳು)ಗಳನ್ನು ಮಾತ್ರ ಅರ್ಹತಾ ಮೊತ್ತವೆಂದು ಮರುಪಾವತಿಸಲು ಸರ್ಕಾರದ ವಿಶೇಷ ಮಂಜೂರಾತಿ ನೀಡಿದೆ.

ಕ್ಲೇಮು ಮಾಡಿರುವ ಚಿಕಿತ್ಸೆಯ ವೆಚ್ಚವನ್ನು ವಿಮಾ ಸಂಸ್ಥೆ, ಇತ್ಯಾದಿ ಯಾವುದೇ ಇತರ ಮೂಲಗಳಿಂದ ಹಿಂಪಡೆದಿಲ್ಲವೆಂಬುದನ್ನು ಖಚಿತಪಡಿಸಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

15/11/18

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

15/11/18

**ಇವರಿಗೆ :-**

1. ಮಹಾಲೇಖಪಾಲರು, (ಲೆಕ್ಕಪತ್ರ ಅ & ಇ) ಕರ್ನಾಟಕ, ಬೆಂಗಳೂರು
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ / ಜಲಸಂಪನ್ಮೂಲ ಇಲಾಖೆ
3. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು
4. ಮುಖ್ಯ ಕಾರ್ಯಾಚರಣೆ ಅದಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ ಬೆಂಗಳೂರು, ಬೆಂಗಳೂರು – ಮೂಲ ಬಿಲ್ಲುಗಳನ್ನು ಇದರೊಂದಿಗೆ ಲಗತ್ತಿಸಿದೆ – ನೊಂದಣಿ ಅಂಚೆ ಮೂಲಕ

5. ಶ್ರೀ ಸಿದ್ದಪ್ಪ, ಕಿರಿಯ ಇಂಜಿನಿಯರ್(ನಿವೃತ್ತ), ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ ಬೆಂಗಳೂರು

ಪ್ರತಿಯನ್ನು :

6. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಉಪ ಕಾರ್ಯದರ್ಶಿ (ಆಡಳಿತ) / ಆಂತರಿಕ ಆರ್ಥಿಕ ಸಲಹೆಗಾರರು ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ
7. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟಿನಲ್ಲಿ ಪ್ರಕಟಿಸುವ ಸಲುವಾಗಿ
8. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು

*****